ಮೈಸೂರು ತಾಲ್ಲೂಕಿನಲ್ಲಿ ಸಣ್ಣ ಕೈಗಾರಿಕೆಗಳು.

1229(1140) ಶ್ರೀ ಗುರುಸ್ವಾಮಿ ಎ.ಎಸ್. (ಚಾಮುಂಡೇಶ್ವರಿ) :— ಮಾನ್ಯ ಸಣ್ಣ ಕೈಗಾರಿಕಾ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ.

ಅ) ಮೈಸೂರು ತಾಲ್ಲೂಕಿನಲ್ಲಿರುವ ಸಣ್ಣ ಕೈಗಾರಿಕೆಗಳೆಷ್ಟು;

ಆ) ಕಳೆದ ಎರಡು ವರ್ಷ ಅವಧಿಯಲ್ಲಿ ಮುಚ್ಚಿರುವ ಘಟಕಗಳೆಷ್ಟು;

ಇ) ಮುಚ್ಚಿರುವ ಘಟಕಗಳನ್ನು ತೆರೆಯಲು ಏನು ಕ್ರಮ ಕೈಗೊಳ್ಳಲಾಗಿದೆ.

ಶ್ರೀ ಎಸ್.ಆರ್. ಹಾಶಪ್ಪನವರ್ (ಸಣ್ಣ ಕೈಗಾರಿಕಾ ಸಚಿವರು) :—

ಅ) 8,223

ಆ) 212

ಇ) ಮುಚ್ಚಿರುವ ಘಟಕಗಳನ್ನು ತೆರೆಯುವ ಬಗ್ಗೆ ಸಚಿವಾಲಯದಿಂದ ನೇರವಾಗಿ ಕ್ರಮ ಕೈಗೊಳ್ಳಲು ಸಾಧ್ಯವಾಗುವುದಿಲ್ಲ. ಪುನಶ್ಚೇತನಗೊಂಡ ಕೈಗಾರಿಕೆಗಳಿಗೆ ಮಾತ್ರ ಕೈಗಾರಿಕಾ ನೀತಿಯಂತೆ ಸೌಲಭ್ಯಗಳನ್ನು ಒದಗಿಸಿ ಕೊಡಲಾಗುತ್ತದೆ.

ರೇಷ್ಮೆಗೆ ಬೆಲೆ ನಿಗಧಿ.

1230 (1151) ಶ್ರೀ ಗುರುಸ್ವಾಮಿ ಎ.ಎನ್. (ಚಾಮುಂಡೇಶ್ವರಿ) :— ಮಾನ್ಯ ರೇಷ್ಮೆ ಮತ್ತು ಜವಳಿ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ.

ಅ. ರೇಷ್ಮೆಗೆ ಸಂಬಂಧಿಸಿದಂತೆ ಸಾಗಾಣಿಕೆ ಅಮದು ಮತ್ತು ಬೆಲೆ ನಿಗದಿಪಡಿಸಲು ಎಲ್ಲಾ ರಾಜ್ಯಗಳಲ್ಲಿ ಏಕರೂಪ ಕಾನೂನು ಜಾರಿಗೆ ತರಲು ಕೇಂದ್ರಸರ್ಕಾರ ನಡೆಸಲಾಗಿದೆಯೇ; ಈ ನಿಟ್ಟಿನಲ್ಲಿ ಬೇರೆ ರಾಜ್ಯಗಳ ಜೊತೆ ಮಾತುಕತೆ ನಡೆಸಲಾಗಿದೆಯೇ?

ಆ. ಈ ನಿಟ್ಟಿನಲ್ಲಿ ಅಮರ ನಿಲುವೇನು?

ಇ. ರೇಷ್ಮೆ ಬೆಳೆ ಲಾಭದಾಯಕವಾಗಲು ಕೈಗೊಂಡಿರುವ ಕ್ರಮಗಳೇನು?

ಶ್ರೀ ಎಂ. ಮಹಾದೇವ್ (ರೇಷ್ಮೆ ಮತ್ತು ಜವಳಿ ಸಚಿವರು) :—

ಅ. ಇಲ್ಲ.

ಆ. ಉದ್ಭವಿಸುವುದಿಲ್ಲ.